ಅ) ಇಲ್ಲ. ದಿನನಿತ್ಯದ ವೆಚ್ಚಗಳಿಗಾಗಿ 25,000 ರೂ. ಗಳ ಮೊತ್ತವನ್ನು ಪ್ರತಿ ತಾಲ್ಲೂಕಿಗೆ ನೀಡಲಾಗುತ್ತಿದೆ.

ಆ) ಉದ್ಭವಿಸುವುದಿಲ್ಲ.

ಇ) ಭೂಮಿ ಯೋಜನೆಗೆ ಸಂಬಂಧಿಸಿದ ವೆಚ್ಚಗಳನ್ನು ಭರಿಸಲು ಪ್ರತಿ ತಾಲ್ಲೂಕಿಗೆ 25,000 ರೂ.ಗಳನ್ನು ನೀಡಲಾಗುತ್ತಿದೆ. ಜಿಲ್ಲಾಧಿಕಾರಿಗಳ ಮಟ್ಟದಲ್ಲಿ ಸಂಗ್ರಹವಾಗುತ್ತಿರುವ ಯೂಸರ್ ಚಾರ್ಜ್‌ಗಳ ಮೊತ್ತವನ್ನು ಜಿಲ್ಲಾಧಿಕಾರಿಗಳೇ ಉಪಯೋಗಿಸಿಕೊಳ್ಳುವ ಪ್ರಸ್ತಾವನೆಯು ಸರ್ಕಾರದ ತೀವ್ರ ಪರಿಶೀಲನೆಯಲ್ಲಿದೆ. ಭೂಮಿ ಕೇಂದ್ರಗಳಿಗೆ ಪೆಸಿಲಿಟಿ ಮ್ಯಾನೇಜರ್‌ಗಳನ್ನು ಒದಗಿಸುವುದನ್ನು ಉದ್ದೇಶಿಸಲಾಗಿದೆ.

ಈ) ಇನ್ನು ಮುಂದೆ ವಾಸ್ತವಿಕ ವೆಚ್ಚಗಳನ್ನು ಆಧರಿಸಿ ಜಿಲ್ಲಾಧಿಕಾರಿಗಳು ತಹಶೀಲ್ದಾರರಿಗೆ ದಿನನಿತ್ಯ ವೆಚ್ಚಗಳಿಗಾಗಿ ಅನುದಾನ ಬಿಡುಗಡೆ ಮಾಡಲಿದ್ದಾರೆ.

ಉ) ಹೌದು. ಭವಿಷ್ಯದಲ್ಲಿ ಜಿಲ್ಲಾಧಿಕಾರಿಗಳು ತಮ್ಮ ಮಟ್ಟದಲ್ಲಿ ಸಂಗ್ರಹವಾದ ಯೂಸರ್ ಚಾರ್ಜ್ ಮೊತ್ತವನ್ನು ಉಪಯೋಗಿಸಿಕೊಳ್ಳಲು ಯೋಜಿಸಲಾಗಿದೆ.

ಮೈಸೂರು ನಗರದ ಚಾಮುಂಡೇಶ್ವರಿ ಬೆಟ್ಟದ ಸುತ್ತಮುತ್ತಲಿನ ಭೂಮಿಯನ್ನು ಕಬಳಿಸಿದ ಬಗ್ಗೆ

208 (649) ಶ್ರೀ ಗುರುಸ್ವಾಮಿ ಎ.ಎಸ್. (ಚಾಮುಂಡೇಶ್ವರಿ) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮೈಸೂರು ನಗರದ ಚಾಮುಂಡೇಶ್ವರಿ ಬೆಟ್ಟದ ಸುತ್ತಮುತ್ತಲಿನ ಭೂಮಿಯನ್ನು ಕಬಳಿಸಿದ ಬಗ್ಗೆ ಹಿಂದೆ ಜಿಲ್ಲಾಧಿಕಾರಿಯವರು ತನಿಖೆ ನಡೆಸಿ ಸರ್ಕಾರಕ್ಕೆ ವರದಿ ಸಲ್ಲಿಸಿರುವ ವಿಚಾರ ನಿಜವಲ್ಲವೆ?

ಆ) ಹಾಗಿದ್ದಲ್ಲಿ, ಸದರಿ ಭೂ ಕಬಳಿಕೆಯಲ್ಲಿ ಭಾಗಿಯಾದವರ ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು?

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು:

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಚಾಮುಂಡಿಬೆಟ್ಟದ ಆರಣ್ಯ ಪ್ರದೇಶದಲ್ಲಿ ಅರಣ್ಯ ಅಭಿವೃದ್ಧಿ ಯೋಜನೆ

209 (653) ಶ್ರೀ ಎ.ಎಸ್. ಗುರುಸ್ವಾಮಿ (ಚಾಮುಂಡೇಶ್ವರಿ) ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮೈಸೂರಿನ ಚಾಮುಂಡೇಶ್ವರಿ ಮತ ಕ್ಷೇತ್ರದಲ್ಲಿ ಬರುವ ಚಾಮುಂಡಿ ಬೆಟ್ಟದ ಅರಣ್ಯ ಪ್ರದೇಶದಲ್ಲಿ ವಿದೇಶಗಳಿಂದ ಧನ ಸಹಾಯ ಪಡೆದು ಅರಣ್ಯ ಅಭಿವೃದ್ಧಿ ಯೋಜನೆಯನ್ನು ಕೈಗೊಳ್ಳಲಾಗಿದೆಯೇ?

ಅ) ಹಾಗಿದ್ದಲ್ಲಿ, ಸದರಿ ಯೋಜನೆ ಎಂದಿನಿಂದ ಪ್ರಾರಂಭವಾಯಿತು ಹಾಗೂ ಎಂದು ಮುಕ್ತಾಯವಾಯಿತು?

ಇ) ಸದರಿ ಯೋಜನೆಯಲ್ಲಿ ನಡೆಯಲಾದ ಅವ್ಯವಹಾರದ ಬಗ್ಗೆ ವಿಧಾನಸಭೆ ಅರ್ಜಿಗಳ ಸಮಿತಿಗೆ ಸಾರ್ವಜನಿಕರಿಂದ ದೂರು ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ.

ಈ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು?

ಶ್ರೀ ಕೆ.ಎಚ್. ರಂಗನಾಥ್ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ) ಸಚಿವರು:

ಅ) ಹೌದು.

ಆ) ಸದರಿ ಯೋಜನೆಯು ದಿನಾಂಕ18-2-1998ರಲ್ಲಿ ಪ್ರಾರಂಭಗೊಂಡಿದ್ದು. ದಿನಾಂಕ 30-9-2002ರಲ್ಲಿ ಮುಕ್ತಾಯವಾಗಲಿದೆ.

ಇ) ಹೌದು.

ಈ) ಅರ್ಜಿಯನ್ನು ಕೂಲಂಕುಷವಾಗಿ ಪರಿಶೀಲಿಸಲಾಗಿದೆ. ಅರ್ಜಿಯಲ್ಲಿ ತಿಳಿಸಿರುವಂತೆ ಯಾವ ತರಹದ ಅವ್ಯವಹಾರ : ದುರುಪಯೋಗ ಕಂಡು ಬಂದಿಲ್ಲ.

ಮೈಸೂರು ಜಿಲ್ಲೆಯಲ್ಲಿ ಪರಿಸರ ನಿಯಮಗಳನ್ನು ಉಲ್ಲಂಘಿಸಿದ ಕಾರ್ಖಾನೆಗಳು

210(656) ಶ್ರೀ ಗುರುಸ್ವಾಮಿ ಎ.ಎಸ್. (ಚಾಮುಂಡೇಶ್ವರಿ) ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮೈಸೂರು ಜಿಲ್ಲೆಯಲ್ಲಿ ಪರಿಸರ ನಿಯಮಾವಳಿಗಳನ್ನು ಉಲ್ಲಂಘಿಸಿರುವ ಕಾರ್ಖಾನೆಗಳ ಸಂಖ್ಯೆ ಎಷ್ಟು?

ಆ) ಪರಿಸರ ನಿಯಮಾವಳಿಗಳನ್ನು ಉಲ್ಲಂಘಿಸಿದ ಎಷ್ಟು ಕಾರ್ಖಾನೆಗಳ ವಿರುದ್ಧ ಸರ್ಕಾರ ಕ್ರಮ ತೆಗೆದುಕೊಂಡಿದೆ?

ಇ) ದಂಡ ವಿಧಿಸಲಾದ ಕಾರ್ಖಾನೆಗಳ ಸಂಖ್ಯೆ ಹಾಗೂ ವಸೂಲು ಮಾಡಲಾದ ಒಟ್ಟು ದಂಡವೆಷ್ಟು?

ಈ) ಸರ್ಕಾರದ ಗಮನಕ್ಕೆ ಬಾರದೆ ಇರುವಂತಹ ಪರಿಸರ ನಿಯಮಾವಳಿಗಳನ್ನು ಉಲ್ಲಂಘಿಸಿದ ಕಾರ್ಖಾನೆಗಳನ್ನು ಗುರುತಿಸಿ ಅವುಗಳ ವಿರುದ್ಧ ಸರ್ಕಾರ ಕ್ರಮ ತೆಗೆದುಕೊಳ್ಳುವುದೇ?

ಶ್ರೀ ಕೆ.ಎಚ್. ರಂಗನಾಥ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ) ಸಚಿವರು:

ಅ) 62 ಕೈಗಾರಿಕೆಗಳು.

ಆ) 25 ಕೈಗಾರಿಕೆಗಳು

ಇ) ಯಾವುದೇ ದಂಡವನ್ನು ವಸೂಲು ಮಾಡಿರುವುದಿಲ್ಲ.

ಈ) ಹೌದು.